**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 15**

**ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2016**

**ಪ್ರಕರಣಗಳ ಪಟ್ಟಿ**

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 19ನೇ ಪ್ರಕರಣದ ತಿದ್ದುಪಡಿ

**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**

**2016ರ ಅಧಿನಿಯಮ ಸಂಖ್ಯೆ 15.–**

ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2013ನ್ನು (2013ರ ಕರ್ನಾಟಕ ಅಧಿನಿಯಮ 37),–

(i) ಕರ್ನಾಟಕ ವಿಧಾನ ಸಭಾ ಸದಸ್ಯರನ್ನು ಒಳಗೊಂಡಂತೆ, ರಾಜ್ಯ ಸರ್ಕಾರವು 2ಕ್ಕಿಂತ ಹೆಚ್ಚಿಲ್ಲದಂತೆ, ಕರ್ನಾಟಕ ರಾಜ್ಯ ವಿಧಾನ ಮಂಡಲದ ಸದಸ್ಯರುಗಳನ್ನು ಪ್ರಾಧಿಕಾರದ ಸದಸುರುಗಳನ್ನಾಗಿ ನಾಮನಿರ್ದೇಶಿಸುವುದಕ್ಕಾಗಿ; ಮತ್ತು

(ii) ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರದ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತಗೊಳಿಸುವಲ್ಲಿ ಪ್ರಾಧಿಕಾರಕ್ಕೆ ಹೆಚ್ಚಿನ ಅಧಿಕಾರಗಳನು ಕಲ್ಪಿಸುವುದಕ್ಕಾಗಿ;

– ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

(2016ರ ವಿಧಾನಸಭೆಯ ವಿಧೇಯಕ ಸಂಖ್ಯೆ 07, ಕಡತ ಸಂಖ್ಯೆ:ಸಂವ್ಯಶಾಇ 58 ಶಾಸನ 2016)

(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5 ಮತ್ತು 32ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 15**

(2016ರ ಜುಲೈ ತಿಂಗಳ ಹದಿನಾಲ್ಕನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2016**

(2016ರ ಜುಲೈ ತಿಂಗಳ ಹದಿನಾಲ್ಕನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2013ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2013ನ್ನು (2013ರ ಕರ್ನಾಟಕ ಅಧಿನಿಯಮ, 37) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ:

ಇದು, ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 19ನೇ ಪ್ರಕರಣದ ತಿದ್ದುಪಡಿ.-** ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2013ರ (2013ರ ಕರ್ನಾಟಕ ಅಧಿನಿಯಮ 37) 19ನೇ ಪ್ರಕರಣದಲ್ಲಿ,-

(i) (2)ನೇ ಉಪಪ್ರಕರಣದಲ್ಲಿ, "ರಾಜ್ಯ ಸರ್ಕಾರವು, ಮಾರ್ಪಾಟುಗಳ ಸಹಿತವಾಗಿ ಅಥವಾ ಯಾವುವೇ ಮಾರ್ಪಾಟುಗಳಿಲ್ಲದೆ ಯೋಜನೆಯನ್ನು ಅನುಮೋದಿಸಬಹುದು." ಎಂಬ ಪದಗಳನ್ನು ಪೂರ್ಣವಿರಾಮ ಚಿಹ್ನೆಯೊಂದಿಗೆ ಬಿಟ್ಟುಬಿಡತಕ್ಕದ್ದು.

(ii) (3)ನೇ ಉಪಪ್ರಕರಣದಲ್ಲಿ, "(2)ನೇ ಉಪ-ಪ್ರಕರಣದ ಅಡಿಯಲ್ಲಿ ಅಭಿವೃದ್ಧಿ ಯೋಜನೆಯನ್ನು ಅನುಮೋದಿಸಿದ ತರುವಾಯ," ಎಂಬ ಪದಗಳನ್ನು, ಆವರಣ ಚಿಹ್ನೆ, ಸಂಖ್ಯೆ ಮತ್ತು ಅಲ್ಪವಿರಾಮ ಚಿಹ್ನೆಯನ್ನು ಬಿಟ್ಟುಬಿಡತಕ್ಕದ್ದು; ಮತ್ತು

(iii) (4)ನೇ ಉಪಪ್ರಕರಣದಲ್ಲಿ, "ರಾಜ್ಯ ಸರ್ಕಾರವು ಅನುಮೋದಿಸಿದ" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳ ಇಲಾಖೆ